## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : 13(49) |
| **ಸದಸ್ಯರ ಹೆಸರು** | : ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : 12.09.2022 |
| **ಉತ್ತರಿಸುವ ಸಚಿವರು** | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ಪ್ರಸ್ತುತ ನೀಡಲಾಗುತ್ತಿದೆಯೇ; | ಇಲ್ಲ. |
| ಆ | ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ನೀಡದಿರಲು ಕಾರಣವೇನು; (ಪೂರ್ಣ ಮಾಹಿತಿಯನ್ನು ನೀಡುವುದು) | ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರಡಿ ರಾಜ್ಯ ಸರ್ಕಾರಿ ನೌಕರರಿಗೆ ಚಿಕಿತ್ಸೆ ಪಡೆದ ನಂತರ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಎಸ್.ಎಂ.ಆರ್ 2013, ದಿನಾಂಕ:18.08.2014ರನ್ವಯ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರುಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯಡಿ 7 ಮಾರಣಾಂತಿಕ ಖಾಯಿಲೆಗಳಿಗೆ ಸಂಬಂಧಿಸಿದಂತೆ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ.<br>ಆದರೆ, ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. |
| ಇ | ರಾಜ್ಯದ ಅನುದಾನಿತ ಶಾಲಾ-ಕಾಲೇಜುಗಳ ಶಿಕ್ಷಕರು ಮತ್ತು ನೌಕರರಿಗೂ ಸರ್ಕಾರಿ ಶಾಲಾ-ಕಾಲೇಜುಗಳ ನೌಕರರಿಗೆ ನೀಡುತ್ತಿರುವ ಮಾದರಿಯಲ್ಲಿಯೇ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೆ ನೀಡಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ? | |

| | | |
|---|---|---|
| | | ಮುಂದುವರೆದು, ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ನೌಕರರು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ, ಅನುದಾನಿತ ಶಾಲಾ-ಕಾಲೇಜುಗಳ ಶಿಕ್ಷಕರು ಮತ್ತು ನೌಕರರು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ. |

ಸಂಖ್ಯೆ: ಇಪಿ 420 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ
ಸಕಾಲ ಸಚಿವರು